## ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ 42 ಪಬವ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 31.01.2017

### ಅಧಿಸೂಚನೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನಿರ್ದೇಶಕರು(ಇ-ಆಡಳಿತ) ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕರ್ನಾಟಕ ಸಾಮಾನ್ಯ ಸೇವೆ(ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ)ಯ ಸೇವೆಗೆ ಸೇರಿದ ಉಪಕಾರ್ಯದರ್ಶಿ(ಆಯ್ಕೆ ಶ್ರೇಣಿ) ಅಧಿಕಾರಿಯಾದ ಶ್ರೀ ಎ.ಬಿ.ಹೇಮಚಂದ್ರ, ಇವರು ದಿನಾಂಕ: 31.01.2017 ರಂದು ಸರ್ಕಾರಿ ಸೇವೆಯಿಂದ ವಯೋನಿವೃತ್ತಿ ಹೊಂದಲಿರುವುದರಿಂದ, ತೆರವಾಗಲಿರುವ ನಿರ್ದೇಶಕರು(ಇ-ಆಡಳಿತ) ಹುದ್ದೆಯಲ್ಲಿ, ಡಾ॥ ಟಿ.ಎಸ್.ಹನುಮಂತೇಗೌಡ, ಸಿ.ಎಫ್.ಎ. (ನರೇಗಾ), ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಧಿಕ ಪ್ರಭಾರದಲ್ಲಿರಿಸಿ ಆದೇಶಿಸಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

(ಎಸ್.ರಂಗನಗೌಡ) 31/01/2017
**ಸರ್ಕಾರದ ಅಧೀನ ಕಾರ್ಯದರ್ಶಿ(ಸೇ-ಬಿ&ಸಿ)**
**ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾ ಇಲಾಖೆ**

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಜಿ&ಎಸ್‌ಎಸ್‌ಎ)/ (ಇ&ಆರ್‌ಎಸ್‌ಎ)/(ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001
2. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಬೆಂಗಳೂರು.
3. ಎಲ್ಲಾ ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
4. ಸಂಬಂಧಿಸಿದ ಅಧಿಕಾರಿಗಳಿಗೆ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ;**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.